# All India Radio: Bangalore
# Regional Bulletin In Kannada
# 08.02.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ಉನ್ನತ ಶಿಕ್ಷಣ, ಸಾರಿಗೆ ಇಲಾಖೆಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಭೆ
2. ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ರಸ್ತೆ ಕಾಮಗಾರಿಗಳು ಶೀಘ್ರವೇ ಪೂರ್ಣ ; ಲೋಕೋಪಯೊಗಿ ಸಚಿವ ಸತೀಶ್ ಜಾರಕಿಹೊಳಿ
3. ಬೆಂಗಳೂರು ಏರ್‌ಶೋಗೆ ಕ್ಷಣಗಣನೆ ; ಬಾನಂಗಳದಲ್ಲಿ ಶಕ್ತಿಶಾಲಿ ಯುದ್ಧ ವಿಮಾನಗಳಿಂದ ತಾಲೀಮು
4. ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ; ರಾಜ್ಯದಲ್ಲಿ ಕಾರ್ಯಕರ್ತರಿಂದ ಸಂಭ್ರಮಾಚರಣೆ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಕಾವೇರಿ ನಿವಾಸದಲ್ಲಿ ಇಂದು ೩ನೇ ದಿನದ ಬಜೆಟ್ ಪೂರ್ವ ಸಭೆ ನಡೆಸುತ್ತಿದ್ದಾರೆ. ಉನ್ನತ ಶಿಕ್ಷಣ ಇಲಾಖೆ ಹಾಗೂ ಮುಜರಾಯಿ ಇಲಾಖೆ, ಸಾರಿಗೆ ಇಲಾಖೆ ಕುರಿತಂತೆ ಸಚಿವ ರಾಮಲಿಂಗಾರೆಡ್ಡಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಇಂದು ನಗರಾಭಿವೃದ್ಧಿ, ಪೌರಾಡಳಿತ, ಆರೋಗ್ಯ, ಮೀನುಗಾರಿಕೆ, ಗ್ರಾಮೀಣಾಭಿವೃದ್ಧಿ ಸೇರಿದಂತೆ ಹಲವು ಇಲಾಖೆಗಳೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಲಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ ೪೮ರ ಚತುಷ್ಪಥ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಗುದ್ದಲಿ ಪೂಜೆ ನೆರವೇರಿಸಿದರು. ಈ ವೇಳೆ ಮಾತನಾಡಿದ ಅವರು, ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ರಸ್ತೆ ಕಾಮಗಾರಿಗಳನ್ನು ಚುರುಕುಗೊಳಿಸಲಾಗುತ್ತಿದ್ದು, ನೆಲಮಂಗಲ, ದಾಬಸ್ ಪೇಟೆವರಗಿನ ರಸ್ತೆಗಳನ್ನೂ ಹಾಗೂ ತುಮಕೂರು ಗ್ರಾಮಾಂತರ ಗಡಿಭಾಗದವರಗೆ

ರಸ್ತೆಗಳನ್ನು ಅಭಿವೃದ್ಧಿ ಮಾಡಲಾಗುವುದು. ಮುಂದಿನ ಆರ್ಥಿಕ ವರ್ಷದಲ್ಲಿ ಶಾಸಕರ ಬೇಡಿಕೆಗಳನ್ನು ಈಡೇರಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಟಿ.ಬೇಗೂರು ಗ್ರಾಮದಿಂದ ತ್ಯಾಮಗೊಂಡ್ಲು, ನಿಡುವಂದ ಮಾರ್ಗವಾಗಿ ತುಮಕೂರು ಗಡಿ ಸೇರುವ ಸುಮಾರು ೧೪.೬ ಕಿಲೋ ಮೀಟರ್ ರಸ್ತೆಯನ್ನು ೩೧ ಕೋಟಿ ೩೬ ಲಕ್ಷ ರೂಪಾಯಿಗಳ ಅಂದಾಜು ಮೊತ್ತದಲ್ಲಿ ನಿರ್ಮಾಣ ಮಾಡಲಾಗುತ್ತಿದೆ.

<><><><>

ಬೆಂಗಳೂರಿನಲ್ಲಿ ಏರ್ ಶೋಗೆ ದಿನಗಣನೆ ಆರಂಭವಾಗಿದೆ. ಇದೇ ಸೋಮವಾರದಿಂದ ೧೪ರವರೆಗೆ ನಡೆಯಲಿರುವ ವೈಮಾನಿಕ ಪ್ರದರ್ಶನದಲ್ಲಿ ದೇಶೀಯ ಹಾಗೂ ವಿದೇಶಿ ವಿಮಾನಗಳು ಸಾಹಸ ಪ್ರದರ್ಶಿಸಲಿವೆ. ಈಗಾಗಲೇ ಬಾನಂಗಳದಲ್ಲಿ ಭಾರತದ ಪ್ರಮುಖ ಶಕ್ತಿಶಾಲಿ ಯುದ್ಧ ವಿಮಾನಗಳು, ಹೆಲಿಕಾಪ್ಟರ್‌ಗಳು ತಾಲೀಮು ನಡೆಸುತ್ತಿವೆ. ಸುಕೊಯ್, ಸೂರ್ಯಕಿರಣ್ ಯುದ್ಧ ವಿಮಾನಗಳು ಈಗಾಗಲೇ ಬಾನಂಗಳದಲ್ಲಿ ರೋಮಾಂಚನ ಮೂಡಿಸಿದೆ. ಏರ್‌ಶೋ ಹಿನ್ನೆಲೆಯಲ್ಲಿ ಬೆಂಗಳೂರಿನ ಬಳ್ಳಾರಿ ರಸ್ತೆಯಲ್ಲಿ ಬಾರಿ ವಾಹನಗಳಿಗೆ ನಿಷೇಧ ಹೇರಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಬೆಂಗಳೂರು ಉತ್ತರ ಹಾಗೂ ಯಲಹಂಕ ಸುತ್ತಮುತ್ತಲಿನ ೨೧ ಕೆರೆಗಳಲ್ಲಿ ಮೀನುಗಾರಿಕೆ ನಿಷೇಧಿಸಲಾಗಿದೆ.

<><><><>

ಇದೇ ೧೦ ರಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಪರೀಕ್ಷಾ ಪೇ ಚರ್ಚಾದ ಎನೇ ಆವೃತ್ತಿಯಲ್ಲಿ ವಿದ್ಯಾರ್ಥಿಗಳು, ಪೋಷಕರು ಮತ್ತು ಶಿಕ್ಷಕರೊಂದಿಗೆ ಪರೀಕ್ಷೆಯ ತಯಾರಿ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತು ಸಂವಾದ ನಡೆಸಲಿದ್ದಾರೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ಸಂವಾದ ಕಾರ್ಯಕ್ರಮವನ್ನು ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ

ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಅಲ್ಲದೇ ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

<><><>

ದೆಹಲಿ ವಿಧಾನಸಭಾ ಚುನಾವಣೆಯ ಫಲಿತಾಂಶದಲ್ಲಿ ಬಿಜೆಪಿ ಗೆಲುವು ದಾಖಲಿಸುತ್ತಿದ್ದಂತೆ, ರಾಜ್ಯ ಬಿಜೆಪಿ ಕಚೇರಿಯಲ್ಲಿ ಸಂಭ್ರಮ ಮನೆ ಮಾಡಿದೆ. ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವಿಜಯೇಂದ್ರ ಮಾತನಾಡಿ, ಈ ಗೆಲುವು ರಾಷ್ಟ್ರಕ್ಕೆ ಒಂದು ಸಂದೇಶ ನೀಡಿದಂತಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ದೆಹಲಿ ವಿಧಾನಸಭಾ ಚುನಾವಣಾ ಫಲಿತಾಂಶ ಪಕ್ಷಕ್ಕೆ ಬಹಳ ಸಂತೋಷ ತಂದಿದೆ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ದೆಹಲಿಯಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವುದಿಲ್ಲ ಎಂಬ ಮಾತಿತ್ತು. ಆದರೆ ೨೭ ವರ್ಷಗಳ ಬಳಿಕ ಜನ ಬಿಜೆಪಿಗೆ ಮತ ಹಾಕಿದ್ದು, ಮೋದಿ ನಾಯಕತ್ವವನ್ನು ನಂಬಿ ಆಶೀರ್ವಾದ ಮಾಡಿದ್ದಾರೆ ಎಂದು ಹೇಳಿದ್ದಾರೆ.

<><><>

ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವಿನ ನಗೆ ಬೀರುತ್ತಿದ್ದಂತೆ ರಾಜ್ಯದಲ್ಲಿ ಬಿಜೆಪಿ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸುತ್ತಿದ್ದಾರೆ. ಚಿತ್ರದುರ್ಗ ನಗರದ ಓಬವ್ವ ವೃತದಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು. ಚಿಕ್ಕಮಗಳೂರು ಜಿಲ್ಲೆಯಲ್ಲೂ ಬಿ.ಜೆ.ಪಿ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದ್ದಾರೆ. ಈ ವೇಳೆ ಮಾತನಾಡಿದ ಕಾರ್ಕಳ ಶಾಸಕ ಸುನೀಲ್ ಕುಮಾರ್, ದೆಹಲಿಯಲ್ಲಿ ಜನರು ಬಿ.ಜೆ.ಪಿಯನ್ನು ಗೆಲ್ಲಿಸಿದ್ದು ಪ್ರಧಾನಿ ಮೋದಿಯವರ ಕಾರ್ಯ ವೈಖರಿ ಮೆಚ್ಚಿಕೊಂಡು ಎಂದು ಶ್ಲಾಘಿಸಿದರು.

<><><>

ಮುಂದಿನ ಒಂದು ತಿಂಗಳಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ನಗದು ರಹಿತ ಆರೋಗ್ಯ ಸೇವೆ ಯೋಜನೆ ಆರಂಭವಾಗಲಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ಹೇಳಿದ್ದಾರೆ ದಾವಣಗೆರೆಯಲ್ಲಿಂದು ಕರ್ನಾಟಕ ರಾಜ್ಯ ಸರ್ಕಾರಿ ರೇಡಿಯಾಲಜಿ ಇಮೇಜಿಂಗ್ ಕೇಂದ್ರ ಸಂಘದಿದ ಹಮ್ಮಿಕೊಂಡಿದ್ದ ವಿಶೇಷ ಸಭೆ ಉದ್ಘಾಟಿಸಿ ಮಾತನಾಡಿದ

ಅವರು, ಸರ್ಕಾರಿ ನೌಕರರಿಗೆ ನಗದು ರಹಿತ ಆರೋಗ್ಯ ಸೇವೆಗೆ ಸರ್ಕಾರ ಒಪ್ಪಿಗೆ ನೀಡಿದೆ. ಮುಂದಿನ ಒಂದು ತಿಂಗಳೊಳಗೆ ಯೋಜನೆ ಆರಂಭಗೊಳ್ಳುವ ನಿರೀಕ್ಷೆ ಇದೆ ಎಂದು ತಿಳಿಸಿದ್ದಾರೆ. ಮುಂದಿನ ಒಂದೂವರೆ ವರ್ಷದಲ್ಲಿ ಕೇಂದ್ರ ಸರ್ಕಾರಿ ನೌಕರರ ಮಾದರಿಯ ವೇತನ ರಾಜ್ಯ ಸರ್ಕಾರಿ ನೌಕರರಿಗೆ ದೊರೆಯುವ ವಿಶ್ವಾಸ ಇದೆ ಎಂದು ಹೇಳಿದ್ದಾರೆ.

<><><><>

ಕೃಷಿ, ಆರ್ಥಿಕ ಕ್ಷೇತ್ರಗಳ ಅಭಿವೃದ್ಧಿಗೆ ಗ್ರಾಮೀಣ ಬ್ಯಾಂಕುಗಳ ಕೊಡುಗೆ ಮಹತ್ವದ್ದಾಗಿದ್ದು, ಯುವ ಜನತೆಗೆ ಉದ್ಯೋಗ ದೊರಕಿಸಿಕೊಡುವಲ್ಲಿಯೂ ಅನನ್ಯವಾದುದು ಎಂದು ಸುಪ್ರೀಂಕೋರ್ಟಿನ ನಿವೃತ್ತ ನ್ಯಾಯಾಧೀಶ ವಿ.ಗೋಪಾಲಗೌಡ ತಿಳಿಸಿದ್ದಾರೆ. ಬಳ್ಳಾರಿಯಲ್ಲಿಂದು ಅಖಿಲ ಭಾರತ ಗ್ರಾಮೀಣ ಬ್ಯಾಂಕ್ ಗಳ ನೌಕರರ ಒಕ್ಕೂಟದ ೧೫ನೇ ತ್ರೈ ವಾರ್ಷಿಕ ಸಮಾವೇಶ ಉದ್ಘಾಟನೆ ಮಾಡಿ ಮಾತನಾಡಿದ ಅವರು, ನಬಾರ್ಡ್ ಕಾರ್ಯವನ್ನು ಶ್ಲಾಘಿಸಿದರು. ಮಹಿಳೆಯರು ಸಂಘಟನೆಗೆ ಮುಂದೆ ಬರಬೇಕು, ನಿಮ್ಮ ಹಕ್ಕುಗಳಿಗಾಗಿ ಹೋರಾಡಬೇಕೆಂದು ಕರೆ ನೀಡಿದರು. ೫೦ ವರ್ಷಗಳ ಹಿಂದೆ ಗ್ರಾಮೀಣ ಭಾಗದ ಕೃಷಿಕರು, ಕೃಷಿಕಾರ್ಮಿಕರು, ಯುವ ಜನತೆಗೆ ಸಹಕಾರಿಯಾಗಲು ಗ್ರಾಮೀಣ ಬ್ಯಾಂಕುಗಳ ಸ್ಥಾಪನೆಯಾಯ್ತು. ಈಗ ಸಾವಿರಾರು ಶಾಖೆಗಳ ಮೂಲಕ ಆರ್ಥಿಕವಾಗಿ ಸದೃಡವಾಗಿದೆ ಎಂದು ತಿಳಿಸಿದರು.

<><><><>

೨೦೨೩-೨೪ ನೇ ಸಾಲಿನಲ್ಲಿ  ಮನ್ರೇಗಾ ಯೋಜನೆ ಅತ್ಯುತ್ತಮ ಅನುಷ್ಠಾನಕ್ಕಾಗಿ ಜಿಲ್ಲಾ ಪಂಚಾಯಿತಿ ಮೈಸೂರು ವತಿಯಿಂದ ನೀಡುವ ಪ್ರಶಸ್ತಿ ಪುರಸ್ಕಾರದಲ್ಲಿ  ಹೆಚ್.ಡಿ.ಕೋಟೆ ತಾಲ್ಲೂಕು ಪಂಚಾಯಿತಿಯು ೪ ಲಕ್ಷ ೦೮ ಸಾವಿರದ ೮೯೦ ಮಾನವ ದಿನಗಳನ್ನು ಸೃಜನೆ ಮಾಡುವ ಮೂಲಕ ಪ್ರಥಮ ಸ್ಥಾನ ಪಡೆದುಕೊಂಡಿದೆ. ಹೆಚ್.ಡಿ.ಕೋಟೆ ತಾಲ್ಲೂಕಿನ ೨೬ ಗ್ರಾಮ ಪಂಚಾಯಿತಿಗಳ ಪೈಕಿ ಚಿಕ್ಕೋಡನಹಳ್ಳಿ ಗ್ರಾಮ ಪಂಚಾಯಿತಿಯು ೪ ಲಕ್ಷದ ೧ ಸಾವಿರದ ೧೧೯ ಮಾನವದಿನಗಳನ್ನು ಸೃಜನೆ ಮಾಡಿರುವುದಕ್ಕೆ ಪ್ರಶಸ್ತಿ ಪಡೆದುಕೊಂಡಿದೆ. ತಾಲ್ಲೂಕು ಮಟ್ಟದ ಅನುಷ್ಠಾನ ಇಲಾಖೆಗಳಲ್ಲಿ ಹೆಚ್.ಡಿ ಕೋಟೆ ಸಾಮಾಜಿಕ ಅರಣ್ಯ ಇಲಾಖೆಯು ೬ ಲಕ್ಷದ ೪ ಸಾವಿರದ ೮೨೫ ಮಾನವ ದಿನಗಳನ್ನು ಸೃಜನೆ ಮಾಡಿ ಪ್ರಶಸ್ತಿಯನ್ನು ಪಡೆದುಕೊಂಡಿದೆ.

<><><><>

ಕ್ರಿಯಾಶೀಲತೆಯಿಂದ ಹಾಗೂ ಉತ್ಸಾಹದಿಂದ ಕಾರ್ಯನಿರ್ವಹಿಸಲು ಕ್ರೀಡೆಗಳು ಸಹಕಾರಿಯಾಗಿವೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಪ್ರಾಯಪಟ್ಟಿದ್ದಾರೆ. ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ೨೦೨೪ ೨೫ನೇ ಸಾಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳ ಹಾಗೂ ಸಿಬ್ಬಂದಿಯ ಜಿಲ್ಲಾ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು. ಸಾರ್ವಜನಿಕ ಸೇವೆಯಲ್ಲಿರುವವರು ಸಂಯಮದಿಂದ ಹಾಗೂ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಣೆಗೆ ಮಾನಸಿಕ ಆರೋಗ್ಯ ಪ್ರಮುಖವಾಗಿದೆ. ಮಾನಸಿಕ ಆರೋಗ್ಯ ಕಾಯ್ದುಕೊಳ್ಳಲು ದಿನನಿತ್ಯದ ಜೀವನ ಶೈಲಿಯಲ್ಲಿ ದೈಹಿಕ ಕ್ರೀಡಾ ಚಟುವಟಿಕೆಯಿಂದ ಕೂಡಿರಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಸಹಯೋಗದಲ್ಲಿ ಮಾರ್ಚ್ ೧೦ ರಂದು ಬಾಗೇಪಲ್ಲಿಯಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಮೇಳ ಹಾಗೂ ಫಲಪುಷ್ಪ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು, ಕೃಷಿ ಸಚಿವ ಚಲುವರಾಯಸ್ವಾಮಿ ಉದ್ಘಾಟಿಸಲಿದ್ದಾರೆ.
2. ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯಡಿಯಲ್ಲಿ ೨೦೨೨-೨೩ನೇ ಸಾಲಿನಲ್ಲಿ ತೇರ್ಗಡೆಯಾದ ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಹಣ ಸಂದಾಯ ಮಾಡಲಾಗುತ್ತಿದೆ. ಅದೇ ರೀತಿ ೨೦೨೩-೨೪ನೇ ಸಾಲಿನಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲಮೋ ಅರ್ಹತೆ ಹೊಂದಿದವರು ಯುವನಿಧಿ ಯೋಜನೆಯ ನಿರುದ್ಯೋಗಿ ಭತ್ಯೆ ಪಡೆಯಲು ಚಿತ್ರದುರ್ಗದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>